ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1982
ಸದಸ್ಯರ ಹೆಸರು	ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	23.03.2021
ಉತ್ತರಿಸುವ ಸಚಿವರು	ಗಣಿ ಮತ್ತು ಭೂವಿಜ್ಞಾನ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಕಟ್ಟಡ ಕಲ್ಲು, ಜಲ್ಲಿ ಮತ್ತು ಮರಳುಗಳ ಬೇಡಿಕೆ ಹೆಚ್ಚುತ್ತಿರುವುದರ ಜೊತೆಗೆ ಗಣಿಗಾರಿಕೆ ಮಾಫಿಯಾ ಕೂಡಾ ಪ್ರಭಾವಿಯಾಗುತ್ತಿರುವ ವರದಿ ಸರ್ಕಾರದ ಗಮನಕ್ಕಿದೆಯೇ:	ಬಂದಿರುತ್ತದೆ.
ಆ)	ಅನಧಿಕೃತ ಗಣಿಗಾರಿಕೆ ತಡೆಯುವಲ್ಲಿ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆ ಕಾರಣ ಎಂಬ ವರದಿ ಇದ್ದು, ಈ ಬಗ್ಗೆ ಸರ್ಕಾರದ ಉತ್ತರವೇನು:	ಸರ್ಕಾರದ ಆದೇಶ ಸಂಖ್ಯೆ ಸಿಐ 194 ಎಂಎಂಎನ್ 2005, ದಿನಾಂಕ 16.11.2005 ರಂತೆ ಅನಧಿಕೃತ ಗಣಿಗಾರಿಕೆ ಚಟುವಟಿಕೆಯನ್ನು ತಡೆಗಟ್ಟಲು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಟಾಸ್ಕ್ ಫೋರ್ಸ್ (ಗಣಿ) ಸಮಿತಿಯನ್ನು ರಚಿಸಲಾಗಿರುತ್ತದೆ ಸರ್ಕಾರದ ಅಧಿಸೂಚನೆ ಸಂಖ್ಯೆ ಸಿಐ 21 ಎಂಎಂಎನ್ (2) 2014, ದಿನಾಂಕ 21.01.2014 ರಂತೆ ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ, 1957ರ ಕಲಂ 21 ಮತ್ತು 22 ರಡಿ ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994ರ ನಿಯಮ 43 ಮತ್ತು 46 ರಂತೆ ಅನಧಿಕೃತ ಗಣಿಗಾರಿಕೆ, ಸಾಗಾಣಿಕೆ ಮತ್ತು ದಾಸ್ತಾನು ವಿರುದ್ಧ ಕ್ರಮವಹಿಸಲು, ಜಿಲ್ಲಾ ಟಾಸ್ಕ್ ಫೋರ್ಸ್ (ಗಣಿ) ಸಮಿತಿಯ ಸದಸ್ಯ ಇಲಾಖೆಗಳಾದ ಕಂದಾಯ, ಅರಣ್ಯ, ಪೋಲೀಸ್ ಹಾಗೂ ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಧಿಕಾರಿಗಳಿಗೆ ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿದೆ.

--2

<table>
<tr><td></td><td></td><td>ಅದರಂತೆ ಅಕ್ರಮವಾಗಿ ಗಣಿಗಾರಿಕೆ ನಡೆಸುತ್ತಿರುವವರ ವಿರುದ್ಧ ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ, 1957 ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994 ರಂತೆ ಮೊಕದ್ದಮೆಗಳನ್ನು ದಾಖಲಿಸಿ, ದಂಡ ವಿಧಿಸಿ, ಸಂಗ್ರಹಿಸಲು ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುತ್ತಿದೆ.</td></tr>
<tr><td>ಇ)</td><td>ರಾಜ್ಯದಲ್ಲಿನ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಲ್ಲಿ ಮಂಜೂರಾದ ಹುದ್ದೆ, ಕಾರ್ಯ ನಿರ್ವಹಿಸುತ್ತಿರುವ ಮತ್ತು ಖಾಲಿ ಹುದ್ದೆಗಳೆಷ್ಟು (ಮಾಹಿತಿ ನೀಡುವುದು)</td><td>ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಸಿಬ್ಬಂದಿ ನೇಮಕಾತಿ
<table>
<tr><th>ಕ್ರ ಸಂ</th><th>ಗುಂಪು</th><th>ಮಂಜೂರಾದ ಹುದ್ದೆಗಳು</th><th>ಭರ್ತಿಯಾದ ಹುದ್ದೆಗಳು</th><th>ಖಾಲಿ ಹುದ್ದೆಗಳು</th></tr>
<tr><td>1</td><td>ಗುಂಪು-ಎ</td><td>68</td><td>35</td><td>33</td></tr>
<tr><td>2</td><td>ಗುಂಪು-ಬಿ</td><td>284</td><td>193</td><td>89</td></tr>
<tr><td>3</td><td>ಗುಂಪು-ಸಿ</td><td>609</td><td>242</td><td>367</td></tr>
<tr><td>4</td><td>ಗುಂಪು-ಡಿ</td><td>277</td><td>42</td><td>235</td></tr>
<tr><td colspan="2">ಒಟ್ಟು</td><td>1238</td><td>514</td><td>724</td></tr>
</table></td></tr>
<tr><td>ಈ</td><td>2020-21 ನೇ ಸಾಲಿನಲ್ಲಿ ರಾಜ್ಯದಲ್ಲಿ ಅಕ್ರಮ ಗಣಿಗಾರಿಕೆ ವಿರುದ್ಧ ದಾಖಲಾದ ಪ್ರಕರಣಗಳೆಷ್ಟು:</td><td>ರಾಜ್ಯದಲ್ಲಿ 2020-21ನೇ ಸಾಲಿನಲ್ಲಿ ಅಕ್ರಮ ಕಲ್ಲು ಗಣಿಗಾರಿಕೆ ಸಂಬಂಧ 580 ಪ್ರಕರಣಗಳನ್ನು ಪತ್ತೆ ಹಚ್ಚಿದ್ದು, 324 ಮೊಕದ್ದಮೆಗಳನ್ನು ದಾಖಲಿಸಿ, ರೂ.2903.13 ಲಕ್ಷಗಳ ದಂಡವನ್ನು ಸಂಗ್ರಹಿಸಲಾಗಿರುತ್ತದೆ.
ಅಕ್ರಮ ಮರಳು ಗಣಿಗಾರಿಕೆ ಸಂಬಂಧ 80 ಪ್ರಕರಣಗಳನ್ನು ಪತ್ತೆ ಹಚ್ಚಿದ್ದು, 34 ಮೊಕದ್ದಮೆಗಳನ್ನು ದಾಖಲಿಸಿ, ರೂ.30.88 ಲಕ್ಷಗಳ ದಂಡವನ್ನು ಸಂಗ್ರಹಿಸಲಾಗಿರುತ್ತದೆ.</td></tr>
<tr><td>ಉ</td><td>ಕಳೆದ 2 ವರ್ಷಗಳ ಅವಧಿಯಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಅಕ್ರಮ ಗಣಿಗಾರಿಕೆಗೆ ಸಂಬಂಧಿಸಿದಂತೆ ದಾಖಲಾದ ಪ್ರಕರಣಗಳೆಷ್ಟು?</td><td>ಬೆಳಗಾವಿ ಜಿಲ್ಲಾ ವ್ಯಾಪ್ತಿಯಲ್ಲಿ ಕಳೆದ 2 ವರ್ಷಗಳಿಂದ ಪತ್ತೆ ಹಚ್ಚಿದ ಅಕ್ರಮ ಗಣಿಗಾರಿಕೆ ಪ್ರಕರಣಗಳ ವಿವರ ಕೆಳಕಂಡಂತಿದೆ:
<table>
<tr><th>ವರ್ಷ</th><th>ಪತ್ತೆ ಹಚ್ಚಿದ ಪ್ರಕರಣಗಳು</th><th>ದಾಖಲಿಸಿದ ಮೊಕದ್ದಮೆಗಳು</th><th>ಸಂಗ್ರಹಿಸಿದ ದಂಡ (ರೂ.ಲಕ್ಷಗಳಲ್ಲಿ)</th></tr>
<tr><td>2019-20</td><td>26</td><td>5</td><td>29.25</td></tr>
<tr><td>2020-21</td><td>8</td><td>8</td><td>10.28</td></tr>
</table></td></tr>
</table>

ಸಂಖ್ಯೆ ಸಿಐ 232 ಎಂಎಂಎನ್ 2021

(ಮುರುಗೇಶ್ ಆರ್. ನಿರಾಣಿ)

ಗಣಿ ಮತ್ತು ಭೂವಿಜ್ಞಾನ ಸಚಿವರು.